# All India Radio: Bangalore
# National Bulletin In Kannada
# 27.02.2025  07.35 a.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ಗುಜರಾತ್‌ನ ಏಕತಾ ಪ್ರತಿಮೆಗೆ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಭೇಟಿ
2. ಮಹಾಕುಂಭಮೇಳ ಸಂಪನ್ನ: ತ್ರಿವೇಣಿ ಸಂಗಮದಲ್ಲಿ ೬೬ ಕೋಟಿ ೩೦ ಲಕ್ಷಕ್ಕೂ ಹೆಚ್ಚು ಭಕ್ತರಿಂದ ಪವಿತ್ರ ಸ್ನಾನ
3. ಆಫ್ರಿಕಾದ ಸಂಪರ್ಕ, ಮೂಲಸೌಕರ್ಯ ಅಭಿವೃದ್ಧಿಗೆ ಭಾರತದಿಂದ  ಗಮನಾರ್ಹ ಕೊಡುಗೆ- ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್
4. ಐಸಿಸಿ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್: ಇಂಗ್ಲೆಂಡ್ ವಿರುದ್ಧ ಅಫ್ಘಾನಿಸ್ತಾನಕ್ಕೆ ೮ ರನ್‌ಗಳ ರೋಚಕ ಜಯ

<><><><>

ಗುಜರಾತ್‌ಗೆ ನಾಲ್ಕು ದಿನಗಳ ಪ್ರವಾಸದಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಬೆಳಗ್ಗೆ ಪ್ರತಿಷ್ಠಿತ ಏಕತಾ ಪ್ರತಿಮೆ ಸ್ಥಳಕ್ಕೆ ಭೇಟಿ ನೀಡಿ, ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ಪ್ರತಿಮೆಗೆ ಪುಷ್ಪ ನಮನ ಸಲ್ಲಿಸಲಿದ್ದಾರೆ. ಅವರು ಸ್ಮಾರಕದ ಪ್ರಮುಖ ಆಕರ್ಷಣಾ ಸ್ಥಳಗಳು ಹಾಗೂ ಏಕ್ತಾ ನಗರಕ್ಕೂ ಭೇಟಿ ನೀಡಲಿದ್ದಾರೆ. ಗುಜರಾತ್ ಭೇಟಿಯ ಸಮಯದಲ್ಲಿ ರಾಷ್ಟ್ರಪತಿಗಳು, ಅಹಮದಾಬಾದ್‌ನ ರಾಷ್ಟ್ರೀಯ ವಿನ್ಯಾಸ ಸಂಸ್ಥೆ ಮತ್ತು ಗಾಂಧಿನಗರದ ರಾಷ್ಟ್ರೀಯ ವಿಧಿವಿಜ್ಞಾನ ವಿಶ್ವವಿದ್ಯಾಲಯದ ಘಟಿಕೋತ್ಸವ ಸಮಾರಂಭಗಳಲ್ಲಿ ಭಾಗವಹಿಸಲಿದ್ದಾರೆ. ಅಲ್ಲದೇ ಕಚ್ ಜಿಲ್ಲೆಯ ಪ್ರತಿಷ್ಠಿತ ಸ್ಥಳಗಳಿಗೆ ಭೇಟಿ ನೀಡಲಿದ್ದಾರೆ.

<><><><>

ಉತ್ತರ ಪ್ರದೇಶದ ಪ್ರಯಾಗ್‌ರಾಜ್‌ನಲ್ಲಿ ನಡೆದ ಮಹಾಕುಂಭಮೇಳವು  ಮಹಾಶಿವರಾತ್ರಿಯಂದು ನಿನ್ನೆ ಯಶಸ್ವಿಯಾಗಿ ಸಂಪನ್ನಗೊಂಡಿದೆ. ೪೫ ದಿನಗಳ ಕಾಲ ನಡೆದ ಆಧ್ಯಾತ್ಮಿಕ ಮಹೋತ್ಸವದಲ್ಲಿ ಸುಮಾರು ೬೬ ಕೋಟಿ ೩೦ ಲಕ್ಷಕ್ಕೂ ಹೆಚ್ಚು ಭಕ್ತರು, ಗಂಗೆ, ಯಮುನೆ ಮತ್ತು ಸರಸ್ವತಿ ನದಿಗಳ ಸಂಗಮವಾದ ತ್ರಿವೇಣಿ ಸಂಗಮದಲ್ಲಿ ಪವಿತ್ರ ಸ್ನಾನ ಮಾಡಿದ್ದಾರೆ. ಮಹಾಶಿವರಾತ್ರಿಯ ಶುಭ ಸಂದರ್ಭದಲ್ಲಿ ನಿನ್ನೆ ೧ ಕೋಟಿ ೫೩ ಲಕ್ಷಕ್ಕೂ ಹೆಚ್ಚು ಭಕ್ತರು ಪವಿತ್ರ ಸ್ನಾನ ಮಾಡಿದ್ದಾರೆ. ಮಹಾಕುಂಭದಲ್ಲಿ  ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ, ಭೂತಾನ್ ರಾಜ ಜಿಗ್ಮೆ ಖೇಸರ್ ನಮ್‌ಗ್ಯೇಲ್ ವಾಂಗ್‌ಚುಕ್, ವಿದೇಶಿ ಪ್ರತಿನಿಧಿಗಳು,

ವಿವಿಧ ರಾಜ್ಯಗಳ ರಾಜ್ಯಪಾಲರು ಮತ್ತು ಮುಖ್ಯಮಂತ್ರಿಗಳು ಹಾಗೂ ಕೇಂದ್ರ ಸಚಿವರು ಸೇರಿದಂತೆ ಅನೇಕರು ಭಾಗಿಯಾಗಿದ್ದರು. ಮಹಾಶಿವರಾತ್ರಿಯಂದು ಭಾರತೀಯ ವಾಯುಪಡೆಯಿಂದ ವೈಮಾನಿಕ ಪ್ರದರ್ಶನ ನಡೆಯಿತು. ಉತ್ತರ ಪ್ರದೇಶ ಸರ್ಕಾರದಿಂದ ಹೆಲಿಕಾಪ್ಟರ್‌ಗಳ ಮೂಲಕ ವಿವಧ ಘಾಟ್‌ಗಳ ಮೇಲೆ ಪುಷ್ಪವೃಷ್ಟಿ ಮಾಡಲಾಯಿತು. ಜನದಟ್ಟಣೆ ನಿಯಂತ್ರಣದ ನಿಟ್ಟಿನಲ್ಲಿ ಅಧಿಕಾರಿಗಳು ಇಂಟೆಗ್ರೇಟೆಡ್ ಕಮಾಂಡ್ ಮತ್ತು ಕಂಟ್ರೋಲ್ ಸೆಂಟರ್‌ನಿಂದ ಪರಿಸ್ಥಿತಿಯನ್ನು ಮೇಲ್ವಿಚಾರಣೆ ನಡೆಸಿದರು. ಈ ಸಂದರ್ಭದಲ್ಲಿ ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಭಕ್ತರು ಮತ್ತು ಸಂತರಿಗೆ ಧನ್ಯವಾದ ಸಲ್ಲಿಸಿದರು. ತ್ರಿವೇಣಿ ಸಂಗಮದಲ್ಲಿ ಶ್ರದ್ಧಾಳುಗಳು ಪವಿತ್ರ ಸ್ನಾನ ಮಾಡುವ ಮೂಲಕ ಇಡೀ ಜಗತ್ತಿಗೆ ರಾಷ್ಟ್ರೀಯ ಏಕತೆ ಮತ್ತು ರಾಷ್ಟ್ರೀಯತೆಯ ಕಡೆಗೆ ಸಮರ್ಪಣೆಯ ಸಂದೇಶವನ್ನು ನೀಡಿದ್ದಾರೆ ಎಂದು ಅವರು ಹೇಳಿದರು.

<><><><>

ಜಾಗತಿಕ ವೇದಿಕೆಯಲ್ಲಿ ಜಾಗತಿಕ ದಕ್ಷಿಣದ ಆಕಾಂಕ್ಷೆಗಳು ಮತ್ತು ಹಿತಾಸಕ್ತಿಗಳನ್ನು ಸಂಪೂರ್ಣವಾಗಿ ಪ್ರತಿನಿಧಿಸುವಂತೆ ನೋಡಿಕೊಳ್ಳುವ ಅಗತ್ಯವನ್ನು ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಒತ್ತಿ ಹೇಳಿದರು. ಜಪಾನ್-ಭಾರತ-ಆಫ್ರಿಕಾ ವ್ಯಾಪಾರ ವೇದಿಕೆ ಉದ್ದೇಶಿಸಿ ಮಾತನಾಡಿದ ಅವರು, ಜಾಗತಿಕ ದಕ್ಷಿಣ ಶೃಂಗಸಭೆಗಳು ಅಥವಾ ಅದರ ಜಿ-೨೦ ಅಧ್ಯಕ್ಷತೆಯ ಮೂಲಕ ಭಾರತವು ಈ ಉದ್ದೇಶವನ್ನು ನಿರಂತರವಾಗಿ ಪ್ರತಿಪಾದಿಸಿದೆ ಎಂದರು. ಸಾಮರ್ಥ್ಯ-ನಿರ್ಮಾಣ, ಕೌಶಲ್ಯ ಅಭಿವೃದ್ಧಿ ಮತ್ತು ತಂತ್ರಜ್ಞಾನ ವರ್ಗಾವಣೆಯಲ್ಲಿ ಭಾರತ ನಂಬಿಕೆ ಇಡುತ್ತದೆ. ಆಫ್ರಿಕನ್ ದೇಶಗಳು ಹೂಡಿಕೆಗಳಿಂದ ಪ್ರಯೋಜನ ಪಡೆಯುವುದಲ್ಲದೆ, ಸ್ವಾವಲಂಬಿ ಬೆಳವಣಿಗೆಯ ಪರಿಸರ ವ್ಯವಸ್ಥೆಗಳನ್ನು ಅಭಿವೃದ್ಧಿಪಡಿಸುತ್ತದೆ ಎಂದು ಡಾ. ಎಸ್.ಜೈಶಂಕರ್ ಹೇಳಿದರು. ಭಾರತವು ಆಫ್ರಿಕಾದ ನಾಲ್ಕನೇ ಅತಿದೊಡ್ಡ ವ್ಯಾಪಾರ ಪಾಲುದಾರ ರಾಷ್ಟ್ರವಾಗಿದ್ದು, ದ್ವಿಪಕ್ಷೀಯ ವ್ಯಾಪಾರವು ಸುಮಾರು ೧೦೦ ಶತಕೋಟಿ ಡಾಲರ್‌ಗಳನ್ನು ತಲುಪಿದೆ. ಆಫ್ರಿಕಾದ ಸಂಪರ್ಕ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ಭಾರತ ಗಮನಾರ್ಹ ಕೊಡುಗೆ ನೀಡಿದೆ. ೧೨ ಶತಕೋಟಿ ಡಾಲರ್‌ಗಳಿಗೂ ಹೆಚ್ಚು ರಿಯಾಯಿತಿ ಸಾಲ ಮತ್ತು ಆಫ್ರಿಕಾ ಖಂಡದಾದ್ಯಂತ ೨೦೦ ಕ್ಕೂ ಹೆಚ್ಚು ಯೋಜನೆಗಳನ್ನು ಪೂರ್ಣಗೊಳಿಸಿದೆ ಎಂದು ತಿಳಿಸಿದರು. ಕುಡಿಯುವ ನೀರಿನ ಯೋಜನೆಗಳು, ನೀರಾವರಿ, ಗ್ರಾಮೀಣ ಸೌರ ವಿದ್ಯುದೀಕರಣ ಮತ್ತು ವಿದ್ಯುತ್ ಸ್ಥಾವರಗಳಂತಹ ವಿವಿಧ ಕ್ಷೇತ್ರಗಳಲ್ಲಿ ಭಾರತದ ಅಭಿವೃದ್ಧಿ ಯೋಜನೆಗಳು ಸ್ಥಳೀಯ ಉದ್ಯೋಗಗಳನ್ನು ಸೃಷ್ಟಿಸಿವೆ ಮತ್ತು ಆಫ್ರಿಕಾದಲ್ಲಿ ಜನರ ಜೀವನವನ್ನು ಬದಲಾಯಿಸಿವೆ ಎಂದು ಡಾ. ಎಸ್. ಜೈಶಂಕರ್ ಹೇಳಿದರು.

**ಧ್ವನಿ: ಡಾ. ಎಸ್. ಜೈಶಂಕರ್ (೩೦ ಸೆಕೆಂಡ್‌ಗಳು)**

<><><>

ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ-ಡಿಆರ್‌ಡಿಒ ಮತ್ತು ಭಾರತೀಯ ನೌಕಾಪಡೆಯು ಒಡಿಶಾದ ಚಂಡಿಪುರದಲ್ಲಿರುವ ಇಂಟಿಗ್ರೇಟೆಡ್ ಟೆಸ್ಟ್ ರೇಂಜ್‌ನಿಂದ ಮೊದಲ ನೌಕಾ ಹಡಗು ವಿರೋಧಿ ಕ್ಷಿಪಣಿಯ ಯಶಸ್ವಿ ಹಾರಾಟ ಪರೀಕ್ಷೆಗಳನ್ನು ನಡೆಸಿದೆ. ಭಾರತೀಯ ನೌಕಾ ಸೀಕಿಂಗ್ ಹೆಲಿಕಾಪ್ಟರ್‌ನಿಂದ ಉಡಾವಣೆಯಾದಾಗ ಈ ಕ್ಷಿಪಣಿಯು ಹಡಗು ಗುರಿಗಳ ವಿರುದ್ಧ ತನ್ನ ಸಾಮರ್ಥ್ಯವನ್ನು ಪ್ರದರ್ಶಿಸಿತು. ಯಶಸ್ವಿ ಹಾರಾಟ ಪರೀಕ್ಷೆಗಳಿಗಾಗಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ಡಿಆರ್‌ಡಿಒ ಮತ್ತು ಭಾರತೀಯ ನೌಕಾಪಡೆಯನ್ನು ಅಭಿನಂದಿಸಿದ್ದಾರೆ. ಮ್ಯಾನ್-ಇನ್-ಲೂಪ್ ವೈಶಿಷ್ಟ್ಯಗಳ ಪರೀಕ್ಷೆಗಳು ವಿಶಿಷ್ಟವಾಗಿದ್ದು, ಅದು ಇನ್-ಫ್ಲೈಟ್ ರಿಟಾರ್ಗೆಟಿಂಗ್ ಸಾಮರ್ಥ್ಯವನ್ನು ನೀಡುತ್ತದೆ ಎಂದು ಅವರು ಹೇಳಿದರು.

<><><>

ಪಾಕಿಸ್ತಾನದ ಲಾಹೋರ್‌ನ ಗಡಾಫಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಸಿಸಿ ಪುರುಷರ ಚಾಂಪಿಯನ್ಸ್ ಟ್ರೋಫಿ ಕ್ರಿಕೆಟ್ ಪಂದ್ಯಾವಳಿಯಲ್ಲಿ ಇಂಗ್ಲೆಂಡ್ ತಂಡದ ವಿರುದ್ಧ ಅಫ್ಘಾನಿಸ್ತಾನ ತಂಡ, ೮ ರನ್‌ಗಳಿಂದ ರೋಚಕ ಜಯ ಸಾಧಿಸಿದೆ. ಈ ಸೋಲಿನೊಂದಿಗೆ, ಇಂಗ್ಲೆಂಡ್ ತಂಡವು ಪಂದ್ಯಾವಳಿಯಿಂದ ಹೊರಬಿದ್ದಿದೆ. ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಅಫ್ಘಾನಿಸ್ತಾನ ನಿಗದಿತ ೫೦ ಓವರ್‌ಗಳಲ್ಲಿ ೭ ವಿಕೆಟ್ ನಷ್ಟಕ್ಕೆ ೩೨೫ ರನ್ ರನ್ ಗಳಿಸಿತು. ಅಫ್ಘಾನಿಸ್ತಾನದ ಪರ ಆರಂಭಿಕ ಆಟಗಾರ ಇಬ್ರಾಹಿಂ ಜದ್ರಾನ್ ೧೭೭ ರನ್ ಗಳಿಸಿ ಐಸಿಸಿ ಚಾಂಪಿಯನ್ಸ್ ಟ್ರೋಫಿ ಇತಿಹಾಸದಲ್ಲಿ ಅತ್ಯಧಿಕ ವೈಯಕ್ತಿಕ ಸ್ಕೋರ್ ದಾಖಲಿಸಿದರು. ಇಂಗ್ಲೆಂಡ್ ಪರ ಜೋಫ್ರಾ ಆರ್ಚರ್ ೩ ಮತ್ತು ಲಿಯಾಮ್ ಲಿವಿಂಗ್‌ಸ್ಟನ್ ೨ ವಿಕೆಟ್ ಪಡೆದರು. ಗುರಿ ಬೆನ್ನಟ್ಟಿದ ಇಂಗ್ಲೆಂಡ್ ೪೯.೫ ಓವರ್‌ಗಳಲ್ಲಿ ೩೧೭ ರನ್‌ಗಳಿಗೆ ಆಲೌಟ್ ಆಯಿತು. ಇಂಗ್ಲೆಂಡ್ ಪರ  ಜೋ ರೂಟ್ ೧೨೦ ರನ್, ಜಾಸ್ ಬಟ್ಲರ್ ೩೮ ರನ್ ಗಳಿಸಿದರು. ಅಫ್ಘಾನಿಸ್ತಾನ ಪರ ಅಜ್ಮತುಲ್ಲಾ ಒಮರ್‌ಜೈ ಐದು ವಿಕೆಟ್ ಮತ್ತು ಮೊಹಮ್ಮದ್ ನಬಿ ೨ ವಿಕೆಟ್ ಪಡೆದರು. ಪಾಕಿಸ್ತಾನದ ರಾವಲ್ಪಿಂಡಿಯಲ್ಲಿ ಇಂದು ನಡೆಯಲಿರುವ ಪಂದ್ಯದಲ್ಲಿ ಪಾಕಿಸ್ತಾನ ಮತ್ತು ಬಾಂಗ್ಲಾದೇಶ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ೨:೩೦ ಕ್ಕೆ ಆರಂಭವಾಗಲಿದೆ.

<><><>

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಮಹಿಳಾ ಪ್ರೀಮಿಯರ್ ಕ್ರಿಕೆಟ್ ಲೀಗ್- ಡಬ್ಲ್ಯೂಪಿಎಲ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ತಂಡ, ಯುಪಿ ವಾರಿಯರ್ಸ್ ತಂಡದ ವಿರುದ್ಧ ೮ ವಿಕೆಟ್‌ಗಳ ಜಯ ಸಾಧಿಸಿದೆ. ಮೊದಲು ಬ್ಯಾಟ್ ಮಾಡಿದ ಯುಪಿ ವಾರಿಯರ್ಸ್, ನಿಗದಿತ ೨೦ ಓವರ್‌ಗಳಲ್ಲಿ ೯ ವಿಕೆಟ್ ನಷ್ಟಕ್ಕೆ ೧೪೨ ರನ್ ಗಳಿಸಿತು. ಯುಪಿ ವಾರಿಯರ್ಸ್ ಪರ ಗ್ರೇಸ್ ಹ್ಯಾರಿಸ್ ೪೫, ವೃಂದಾ ದಿನೇಶ್ ೩೩ ರನ್ ಗಳಿಸಿದರು. ಮುಂಬೈ ಪರ

ನ್ಯಾಟ್ ಸ್ಕಿವರ್ ಬ್ರಂಟ್ ೩, ಸಂಸ್ಕೃತಿ ಗುಪ್ತಾ ಹಾಗೂ ಶಬ್ನಿಮ್ ಇಸ್ಮಾಯಿಲ್ ತಲಾ ೨ ವಿಕೆಟ್ ಪಡೆದರು. ೧೪೩ ರನ್‌ಗಳ ಗುರಿ ಬೆನ್ನತ್ತಿದ ಮುಂಬೈ ತಂಡ ಇನ್ನೂ ೧೮ ಎಸೆತಗಳು ಬಾಕಿ ಇರುವಂತೆಯೇ ಗುರಿ ತಲುಪಿತು. ಮುಂಬೈ ಪರ ನ್ಯಾಟ್ ಸ್ಕಿವರ್ ಬ್ರಂಟ್ ೭೫, ಹೈಲೀ ಮ್ಯಾಥ್ಯೂಸ್ ೫೯ ರನ್ ಗಳಿಸಿದರು. ಬೆಂಗಳೂರಿನಲ್ಲಿ ಇಂದು ನಡೆಯುವ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಗುಜರಾತ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭:೩೦ಕ್ಕೆ ಆರಂಭವಾಗಲಿದೆ.

<><><><>

ಮಹಾರಾಷ್ಟ್ರದ ನಾಗ್ಪುರದಲ್ಲಿ ನಡೆಯುತ್ತಿರುವ ರಣಜಿ ಟ್ರೋಫಿ ಫೈನಲ್‌ನಲ್ಲಿ ಕೇರಳ ವಿರುದ್ಧ ವಿದರ್ಭ ತಂಡ ಮೊದಲ ದಿನದಾಟದ ಅಂತ್ಯಕ್ಕೆ ನಿನ್ನೆ, ೪ ವಿಕೆಟ್‌ಗೆ ೨೫೪ ರನ್ ಗಳಿಸಿದೆ. ವಿಸಿಎ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಪಂದ್ಯದಲ್ಲಿ ವಿದರ್ಭ ಪರ, ಕರುಣ್ ನಾಯರ್ ಮತ್ತು ಡ್ಯಾನಿಶ್ ಮಾಲೆವಾರ್ ಅದ್ಭುತ ಪ್ರದರ್ಶನ ನೀಡಿದರು. ವಿದರ್ಭ ಮೂರು ವಿಕೆಟ್‌ಗೆ ೨೪ ರನ್ ಗಳಿಸಿ ಸಂಕಷ್ಟದಲ್ಲಿದ್ದಾಗ ಈ ಜೋಡಿ ೨೧೫ ರನ್‌ಗಳ ನಿರ್ಣಾಯಕ ಜೊತೆಯಾಟದ ಮೂಲಕ ಬೃಹತ್ ಮೊತ್ತ ಕಲೆಹಾಕಿತು. ಡ್ಯಾನಿಶ್ ಮಾಲೆವಾರ್ ೧೩೮ ರನ್ ಗಳಿಸಿ ಅಜೇಯರಾಗಿ ಉಳಿದರು ಮತ್ತು ನಾಯರ್ ೮೬ ರನ್ ಗಳಿಸಿದರು. ಕೇರಳ ಪರ ಎಂ.ಡಿ.ನಿದೀಶ್ ಎರಡು ವಿಕೆಟ್ ಪಡೆದರೆ, ವೇಗಿ ಈಡನ್ ಆಪಲ್ ಟಾಮ್ ಒಂದು ವಿಕೆಟ್ ಪಡೆದರು.

<><><><>

ರಾಷ್ಟ್ರೀಯ ಕ್ರೀಡಾ ಒಕ್ಕೂಟಗಳಿಗೆ ಆರ್ಥಿಕ ಸಹಾಯ ಕಲ್ಪಿಸುವ ಮಾನದಂಡಗಳನ್ನು ಪರಿಷ್ಕರಿಸಲು ಸರ್ಕಾರ ೭ ಸದಸ್ಯರ ಸಮಿತಿಯನ್ನು ರಚಿಸಿದೆ. ಕೇಂದ್ರ ಯುವಜನ ವ್ಯವಹಾರ ಹಾಗೂ ಕ್ರೀಡಾ ಸಚಿವಾಲಯದ ಜಂಟಿ ಕಾರ್ಯದರ್ಶಿ ಕುನಾಲ್ ನೇತೃತ್ವದಲ್ಲಿ ಈ ಸಮಿತಿ ಕಾರ್ಯ ನಿರ್ವಹಿಸಲಿದೆ ಎಂದು ಸಚಿವಾಲಯ ತಿಳಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>